# ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು

## ಸಿಸಿ ಸಂಖ್ಯೆ: 36/2017

ಪಿರ್ಯಾದುದಾರರು : ಹುಲ್ಲಹಳ್ಳಿ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು : 1. ಶಿವಣ್ಣ ಬಿನ್ ಲೇಟ್ ಗುರುಮಲ್ಲಪ್ಪ, 22 ವರ್ಷ,
2. ಮಲ್ಲೇಶ ಬಿನ್ ಮುದ್ದಪ್ಪ, 23 ವರ್ಷ,
ವಾಸಃ ಚಿಲ್ಕಹಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು.

*****

## :: ದೋಷಾರೋಪಣೆ ::

*ಶ್ರೀ ರಘುರಾಮ ಎನ್. ಎಸ್.,* ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಮೇಲ್ಕಂಡ ಆರೋಪಿಗಳಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಗಳನ್ನು ನಿರೂಪಿಸುತ್ತಿದ್ದೇನೆ.

ದಿನಾಂಕ 22.06.2016 ರಂದು ಸಂಜೆ 5.30 ಗಂಟೆ ಸಮಯದಲ್ಲಿ ಹುಲ್ಲಹಳ್ಳಿ ಪೋಲಿಸ್ ಠಾಣಾ ವ್ಯಾಪ್ತಿಗೆ ಚಿಲಕಹಳ್ಳಿ ಗ್ರಾಮದ ಆಲದಮ್ಮ ದೇವಸ್ಥಾನದ ಆವರಣ ಜಾಗದಲ್ಲಿ ಆರೋಪಿತರನ್ನು ಚಾಸಾ–2 ರವರನ್ನು ಕ್ರಿಕೆಟ್ ಆಡುವುದಕ್ಕೆ ಸೇರಿಸಿಕೊಳ್ಳಿ ಎಂದು ಕೇಳಿದಾಗ ಆರೋಪಿತರಾದ ನೀವು ಹಳೆಯ ದ್ವೇಷದಿಂದ ಚಾಸಾ–1 ರವರಿಗೆ ನಿನ್ನನ್ನು ಆಟಕ್ಕೆ ಸೇರಿಸಿಕೊಳ್ಳುವುದಿಲ್ಲ ಹೊಗೋ ಬೋಳಿಮಗನೇ ಎಂದು ಅವಾಚ್ಯ ಶಬ್ದಗಳಿಂದ ಬೈದು ಅವಮಾನ ಮಾಡಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 504 ಸಹವಾಚಕ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ ಅದೇ ದಿನ, ವೇಳೆ ಹಾಗೂ ಸ್ಥಳದಲ್ಲಿ ಆರೋಪಿಗಳಾದ ನೀವು ಸಮಾನ ಉದ್ದೇಶದಿಂದ ಗಲಾಟೆ ಮಾಡಿ, 1 ನೇ ಆರೋಪಿಯಾದ ನೀವು ಕೈಯಲ್ಲಿದ್ದ ಕ್ರಿಕೆಟ್ ಬ್ಯಾಟಿನಿಂದ ಚಾಸಾ–2 ರವರ ಬಲತೋಳಿಗೆ ಹೊಡೆದು ನೋವುಂಟು ಮಾಡಿದ್ದು, 2 ನೇ ಆರೋಪಿಯಾದ ನೀವು ಕೈಯಲ್ಲಿದ್ದ ಕ್ರಿಕೆಟ್ ಬ್ಯಾಟಿನಿಂದ ಚಾಸಾ–2 ರವರ ಬಲಕಾಲಿನ ಪಾದಕ್ಕೆ ಹೊಡೆದು ನೋವುಂಟು ಮಾಡಿದ್ದು, 1 ನೇ ಆರೋಪಿಯಾದ ನೀವು ಕೈಯಲ್ಲಿದ್ದ ಕ್ರಿಕೆಟ್ ಬ್ಯಾಟಿನಿಂದ ಚಾಸಾ–3 ರವರ ಎಡಭುಜಕ್ಕೆ ಹೊಡೆದು ನೋವುಂಟು ಮಾಡಿದ್ದು, 2 ನೇ ಆರೋಪಿಯಾದ ನೀವು ಕೈಯಲ್ಲಿದ್ದ ಕ್ರಿಕೆಟ್ ಬ್ಯಾಟಿನಿಂದ ಚಾಸಾ–3 ರವರ ಬೆನ್ನಿನ ಎಡಭಾಗಕ್ಕೆ ಹೊಡೆದು ನೋವುಂಟು ಮಾಡಿರುವ ಕಾರಣ ಭಾರತೀಯ ದಂಡ ಸಂಹಿತೆ ಕಲಂ 324 ಸಹವಾಚಕ ಕಲಂ 34 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೇಲ್ಕಂಡ ನಿಮ್ಮ ಮೇಲಿನ ಆರೋಪಣೆಯ ಬಗ್ಗೆ ವಿಚಾರಣೆಯಾಗಲು ಈ ಮೂಲಕ ಆದೇಶಿಸುತ್ತೇನೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ.,
ನಂಜನಗೂಡು

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನಂಜನಗೂಡು

## ಸಿಸಿ ಸಂಖ್ಯೆ: 36/2017

ಪಿರ್ಯಾದುದಾರರು : ಹುಲ್ಲಹಳ್ಳಿ ಠಾಣೆ, ನಂಜನಗೂಡು

ವಿರುದ್ಧ

ಆರೋಪಿಗಳು : 1. ಶಿವಣ್ಣ ಬಿನ್ ಲೇಟ್ ಗುರುಮಲ್ಲಪ್ಪ, 22 ವರ್ಷ,
2. ಮಲ್ಲೇಶ ಬಿನ್ ಮುದ್ದಪ್ಪ, 23 ವರ್ಷ,
ವಾಸಃ ಚಿಲ್ಕಹಳ್ಳಿ ಗ್ರಾಮ, ನಂಜನಗೂಡು ತಾಲ್ಲೂಕು.

*****

## :: ದೋಷಾರೋಪಣೆ ::

ಪ್ರಶ್ನೆಃ 1– ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ಓದಿ ಹೇಳಿದ್ದು ಅರ್ಥವಾಯಿತೆ ?

ಆರೋಪಿ ಉತ್ತರಃ

ಪ್ರಶ್ನೆಃ 2 ಸದರಿ ಆಪಾದನೆಗಳನ್ನು ಒಪ್ಪಿಕೊಳ್ಳುವೆಯಾ ಅಥವಾ ವಿಚಾರಣೆಯಾಗಬೇಕೋ?

ಆರೋಪಿ ಉತ್ತರಃ

ಮೇಲ್ಕಂಡ ಎಲ್ಲಾ ಆಪಾದನೆಗಳನ್ನು ನನ್ನ ಸಮಕ್ಷಮ ಓದಿ ಹೇಳಿ ಆರೋಪಿತನ ಹೇಳಿಯನ್ನು ಪಡೆದುಕೊಂಡು ಸತ್ಯವಾಗಿದೆ ಎಂದು ದೃಢೀಕರಿಸಲಾಗಿದೆ.

ದಿನಾಂಕಃ 31.10.2022 ಪ್ರಧಾನ ಸಿವಿಲ್ ನ್ಯಾಯಾಧೀಶರು ಜೆಎಂಎಫ್‌ಸಿ.,

ನಂಜನಗೂಡು